# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ಸಂಖ್ಯೆ: ತುವಿ:ಶೈ.ವಿ:ಬಿ.ಇಡಿ:2018–19: 3307 ದಿನಾಂಕ:15.12.2018

## : ಸುತ್ತೋಲೆ :

ವಿಷಯ: 2018–19 ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಕೋಟಾದಡಿಯಲ್ಲಿ ಹಂಚಿಕೆಯಾಗಿ ಖಾಲಿ ಉಳಿದ/ ಉಳಿಯುವ ಬಿ.ಇಡಿ ಸೀಟುಗಳನ್ನು ಆಡಳಿತ ಮಂಡಳಿಯ ಕೋಟಾದಡಿಯಲ್ಲಿ ಭರ್ತಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ:ಇಡಿ389 ಯುಆರ್‌ಸಿ 2018 ದಿನಾಂಕ:22.11.2018
2) ಅಧಿಸೂಚನೆ ಸಂಖ್ಯೆ: ತುವಿ/ಶೈವಿ/ಬಿಇಡಿ/2018–19/2758 ದಿನಾಂಕ:07.11.2018
3) ಮಾನ್ಯ ಕುಲಪತಿಯವರ ಅನುಮೋದನೆ (ಕಂಡಿಕೆ–06) ದಿನಾಂಕ:14.12.2018

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(01) ರ ಸರ್ಕಾರದ ಆದೇಶದಂತೆ 2018–19 ನೇ ಶೈಕ್ಷಣಿಕ ಸಾಲಿನ ಬಿ.ಇಡಿ ಕೋರ್ಸಿಗೆ ಸರ್ಕಾರಿ ಕೋಟಾದಡಿಯಲ್ಲಿ ಹಂಚಿಕೆಯಾಗಿ ಖಾಲಿ ಉಳಿದ/ಉಳಿಯುವ ಸೀಟುಗಳನ್ನು ಸರ್ಕಾರವು ವಿಧಿಸಿರುವ ಷರತ್ತುಗಳನ್ನು ಪಾಲಿಸಿಕೊಂಡು ಆಡಳಿತ ಮಂಡಳಿಯ ಕೋಟಾದಡಿಯಲ್ಲಿ ಭರ್ತಿ ಮಾಡಿಕೊಳ್ಳಲು ಈ ಮೂಲಕ ಅನುಮತಿಸಲಾಗಿದೆ.

ಉಲ್ಲೇಖ(02)ರಲ್ಲಿ ಅಧಿಸೂಚಿಸಿರುವ ಶೈಕ್ಷಣಿಕ ವೇಳಾಪಟ್ಟಿಯನ್ವಯ ಪ್ರವೇಶಾತಿಗೆ ಕೊನೆಯ ದಿನಾಂಕ:20.12.2018 ಆಗಿದ್ದು, ಈ ಪರಿವರ್ತಿತ ಕೋಟಾದಡಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ದಂಡಶುಲ್ಕವಿಲ್ಲದೇ ದಿ:20.12.2018 ರೊಳಗೆ ಪ್ರವೇಶಾತಿ ಮಾಡಿಕೊಳ್ಳುವಂತೆ ತಿಳಿಸಲಾಗಿದೆ. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ, ಪ್ರಸ್ತುತ ಸರ್ಕಾರಿ ಕೋಟಾ ಸೀಟುಗಳನ್ನು ಆಡಳಿತ ಮಂಡಳಿ ಕೋಟಾ ಸೀಟುಗಳಾಗಿ ಭರ್ತಿ ಮಾಡಿಕೊಂಡು ಪ್ರವೇಶ ಪಟ್ಟಿಯನ್ನು ಸಲ್ಲಿಸುವಾಗ ಒಟ್ಟಾರೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಅನುಮೋದನೆಗಾಗಿ ಸಲ್ಲಿಸುವಂತೆ ತಿಳಿಸಲಾಗಿದೆ. ಈಗಾಗಲೇ ಸರ್ಕಾರಿ ಕೋಟಾದಡಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಪಟ್ಟಿ, ಆಡಳಿತ ಮಂಡಳಿಯ ಕೋಟಾದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಪಟ್ಟಿ ಹಾಗೂ ಈ ಸುತ್ತೋಲೆಯನ್ವಯ ಸರ್ಕಾರದ ಆದೇಶಾನುಸಾರ ಖಾಲಿ ಉಳಿದ/ಉಳಿಯುವ ಸರ್ಕಾರಿ ಕೋಟಾ ಸೀಟುಗಳಿಗೆ ಆಡಳಿತ ಕೋಟಾದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಪ್ರತ್ಯೇಕವಾಗಿ ಕಡ್ಡಾಯವಾಗಿ ಸಲ್ಲಿಸುವಂತೆ ಹಾಗೂ ಶುಲ್ಕ ಪಾವತಿ ಚಲನ್‌ನ್ನು ನಿಗದಿತ ದಿನಾಂಕದಂದು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಸೂಚಿಸಿದೆ.

ಸರ್ಕಾರದ ಆದೇಶವನ್ನು ವಿಶ್ವವಿದ್ಯಾನಿಲಯದ ಅಧಿಕೃತ ಜಾಲತಾಣ www.tumkuruniversity.ac.in ನಲ್ಲಿ ಪ್ರಕಟಿಸಲಾಗಿದ್ದು ಸದರಿ ಆದೇಶದಲ್ಲಿನ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿ ಪ್ರವೇಶಾತಿಯನ್ನು ಮಾಡಿಕೊಳ್ಳುವುದೆಂದು ಈ ಮೂಲಕ ತಿಳಿಸಿದೆ.

15/12

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರುಗಳು, ಎಲ್ಲಾ ಸಂಯೋಜಿತ ಶಿಕ್ಷಣ ಮಹಾವಿದ್ಯಾಲಯಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು :

1. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.– ವಿ.ವಿ. ಜಾಲತಾಣದಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
3. ಕಚೇರಿ ಪ್ರತಿ.

E:\Parappa\Letter.docx